**All India Radio: Bangalore**
**National Bulletin In Kannada**
**09.01.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.01.2025** **07.35 a.m.**

ಮುಖ್ಯಾಂಶಗಳು

1. ಇಂದಿನಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಮೇಘಾಲಯ, ಒಡಿಶಾ ಭೇಟಿ : ಭಾರತೀಯ ಕೃಷಿ ಸಂಶೋಧನಾ ಮಂಡಳಿ ಕಾರ್ಯಕ್ರಮದಲ್ಲಿ ಭಾಗಿ
2. ಒಡಿಶಾದ ಭುವನೇಶ್ವರದಲ್ಲಿ ಪ್ರವಾಸಿ ಭಾರತೀಯ ದಿವಸ್ ಸಮಾವೇಶಕ್ಕೆ ಪ್ರಧಾನಿ ಇಂದು ಅಧಿಕೃತ ಚಾಲನೆ
3. ಆಂಧ್ರಪ್ರದೇಶದ ಸುಪ್ರಸಿದ್ಧ ತೀರ್ಥಕ್ಷೇತ್ರ ತಿರುಪತಿಯಲ್ಲಿ ಕಾಲ್ತುಳಿತ ; ೬ ಮಂದಿ ಸಾವು, ಪ್ರಧಾನಿ ಮೋದಿ ಸಂತಾಪ
4. ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ ; ಹೆಚ್.ಎಸ್. ಪ್ರಣಯ್, ಮಾಳವಿಕಾ ಬಾನ್ಸೋಡ್ ಪ್ರೀ ಕ್ವಾರ್ಟರ್ ಪ್ರವೇಶ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದಿನಿಂದ ಮೇಘಾಲಯ ಮತ್ತು ಒಡಿಶಾಗೆ ಭೇಟಿ ನೀಡಲಿದ್ದಾರೆ. ಮೇಘಾಲಯದ ಉಮಿಯಮ್‌ನಲ್ಲಿ ಈಶಾನ್ಯ ಗುಡ್ಡಗಳ ಪ್ರದೇಶಕ್ಕಾಗಿ ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಸಂಶೋಧನಾ ಸಂಕೀರ್ಣದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಒಡಿಶಾದ ಭುವನೇಶ್ವರದಲ್ಲಿ ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಹಾಗೂ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

<><><><>

ಆಂಧ್ರ ಪ್ರದೇಶದ ವಿಶಾಖಪಟ್ಟಣಂನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನಿನ್ನೆ ೨ ಲಕ್ಷ ಕೋಟಿ ರೂಪಾಯಿ ವೆಚ್ಚದ ವಿವಿಧ ಯೋಜನೆಗಳಿಗೆ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಅವರು, ವಿಶಾಖಪಟ್ಟಣಂ ಬಳಿಯ ಪೂಡಿಮಡಾಕದಲ್ಲಿ ೧ ಲಕ್ಷದ ೮೫ ಸಾವಿರ ಕೋಟಿ ರೂಪಾಯಿಗಳ ಅತ್ಯಾಧುನಿಕ ಎನ್‌ಟಿಪಿಸಿ ಗ್ರೀನ್ ಎನರ್ಜಿ ಲಿಮಿಟೆಡ್‌ನ, ಗ್ರೀನ್ ಹೈಡ್ರೋಜನ್ ಹಬ್ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಆಂಧ್ರ ಯೂನಿವರ್ಸಿಟಿ ಎಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು. ಸ್ವರ್ಣಾಂಧ್ರ ಪ್ರದೇಶ ಭಾಗವಾಗಿ ಆಂಧ್ರಪ್ರದೇಶ ಸರ್ಕಾರ ೨೦೪೭ರ ವೇಳೆಗೆ ದೊಡ್ಡ ಆರ್ಥಿಕತೆಯಾಗಿ ಬೆಳೆಯುವ ಗುರಿಯನ್ನು ಹೊಂದಿದೆ. ಅದನ್ನು ಸಾಕಾರಗೊಳಿಸಲು ಕೇಂದ್ರ ಸರ್ಕಾರವು ಜೊತೆಯಾಗಿ

ಕೆಲಸ ಮಾಡಲಿದೆ ಎಂದು ಭರವಸೆ ನೀಡಿದರು. ದೇಶದಲ್ಲಿ ೨೦೨೩ರಲ್ಲಿ ನ್ಯಾಷನಲ್ ಗ್ರೀನ್ ಹೈಡ್ರೋಜನ್ ಮಿಷನ್ ಆರಂಭಿಸಲಾಗಿದೆ. ಈ ಯೋಜನೆಯಡಿ ವಾರ್ಷಿಕ ೫೦ ಲಕ್ಷ ಟನ್ ಹಸಿರು ಜಲಜನಕ ಉತ್ಪಾದಿಸುವ ಗುರಿ ಹೊಂದಲಾಗಿದ್ದು, ಮೊದಲ ಹಂತವಾಗಿ ಎರಡು ಗ್ರೀನ್ ಹೈಡ್ರೋಜನ್ ಹಬ್‌ಗಳನ್ನು ಸ್ಥಾಪಿಸಲಾಗುವುದು. ಈ ಪೈಕಿ ಒಂದು ವಿಶಾಖಪಟ್ಟಣದಲ್ಲಿ ತಲೆ ಎತ್ತಲಿದೆ ಎಂದು ಪ್ರಧಾನಿ ಘೋಷಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೩೯ ಸೆಕೆಂಡ್ಸ್)

ಇದಕ್ಕೂ ಮುನ್ನ ವಿಶಾಖಪಟ್ಟಣಕ್ಕೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಮತ್ತು ಉಪ ಮುಖ್ಯಮಂತ್ರಿ ಕೆ. ಪವನ್ ಕಲ್ಯಾಣ್ ಅವರೊಂದಿಗೆ ರೋಡ್ ಶೋ ನಡೆಸಿದರು.

<><><>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ನವದೆಹಲಿಯಲ್ಲಿ ನಿನ್ನೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿ, ಮುಂಬರುವ ಕೇಂದ್ರ ಬಜೆಟ್‌ಗೆ ಸಂಬಂಧಿಸಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಸಿದರು. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೃಷಿ, ಗ್ರಾಮೀಣಾಭಿವೃದ್ಧಿ, ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ - ಐಸಿಎಆರ್ ಮತ್ತು ಭೂ ಸಂಪನ್ಮೂಲಗಳು ಸೇರಿದಂತೆ ನಾಲ್ಕು ಇಲಾಖೆಗಳ ಆಯ-ವ್ಯಯ ಕುರಿತು ಸಭೆಯಲ್ಲಿ ಚರ್ಚೆ ನಡೆಸಲಾಯಿತು ಎಂದು ಸಚಿವ ಶಿವರಾಜ್‌ಸಿಂಗ್ ಚೌವ್ಹಾಣ್ ವಿವರಿಸಿದರು. ಇದಕ್ಕೂ ಮುನ್ನ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬಜೆಟ್ ಕುರಿತು ರೈತರು, ಸಂಸ್ಕರಣೆಯಲ್ಲಿ ತೊಡಗಿರುವ ಜನರು ಮತ್ತು ಭಾಗಿದಾರರೊಂದಿಗೆ ವ್ಯಾಪಕ ಚರ್ಚೆ ನಡೆಸಿದ್ದೇನೆ ಮತ್ತು ಹಣಕಾಸು ಸಚಿವರೊಂದಿಗೆ ಎಲ್ಲಾ ಅಂಶಗಳನ್ನು ಸೂಚಿಸಿದ್ದೇನೆ ಎಂದು ಸಚಿವರು ಮಾಹಿತಿ ನೀಡಿದರು.

<><><>

ಜಮ್ಮು ಕಾಶ್ಮೀರದ ಕತ್ರಾದಿಂದ ಶ್ರೀನಗರಕ್ಕೆ ಹೋಗುವ ಜಮ್ಮು ಶ್ರೀನಗರ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಶೀಘ್ರದಲ್ಲೇ ಸಂಚಾರ ಆರಂಭಿಸಲಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಈ ರೈಲು ಎಂಟು ಬೋಗಿಗಳನ್ನು ಹೊಂದಿದ್ದು, ಕೇವಲ ಮೂರು ಗಂಟೆ ಹತ್ತು ನಿಮಿಷಗಳ ಪ್ರಯಾಣ ಒಳಗೊಂಡಿದೆ. ಹೊಸದಾಗಿ ನಿರ್ಮಿಸಲಾದ ಜಮ್ಮು ವಿಭಾಗದಲ್ಲಿ ೧೧೧ ಕಿಲೋಮೀಟರ್ ಉದ್ದದ ಬನಿಹಾಲ್-ಕತ್ರಾ ವಿಭಾಗದ ಅಂತಿಮ ಸುರಕ್ಷತಾ ಪರಿಶೀಲನೆ ಕಾರ್ಯ ಪ್ರಾರಂಭವಾಗಿದೆ ಮತ್ತು ಈ ವರ್ಷದ ಕೊನೆಯಲ್ಲಿ ರೈಲುಗಳ ಸಂಚರಿಸುವ ನಿರೀಕ್ಷೆಯಿದೆ. ೮ ಪ್ಲಾಟ್‌ಫಾರ್ಮ್‌ಗಳು ಮತ್ತು ಆಧುನಿಕ ಸೌಕರ್ಯಗಳೊಂದಿಗೆ ಜಮ್ಮು ನಿಲ್ದಾಣವನ್ನು ವಿನ್ಯಾಸಗೊಳಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><><>

ಆಂಧ್ರಪ್ರದೇಶದ ಸುಪ್ರಸಿದ್ಧ ತೀರ್ಥಕ್ಷೇತ್ರ ತಿರುಪತಿ-ತಿರುಮಲದಲ್ಲಿ ನಾಳೆಯಿಂದ ಆರಂಭಗೊಳ್ಳಲಿರುವ ವೈಕುಂಠ ಏಕಾದಶಿ ದರ್ಶನಕ್ಕಾಗಿ ತಿರುಪತಿ ಪಟ್ಟಣದ ಟೋಕನ್ ವಿತರಿಸುವ ಕೌಂಟರ್‌ನಲ್ಲಿ ನಿನ್ನೆ ಸಂಭವಿಸಿದ ಕಾಲ್ತುಳಿತದಲ್ಲಿ ಆರು ಜನರು ಸಾವನ್ನಪ್ಪಿದ್ದು, ೪೦ ಜನರು ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ. ಘಟನೆ ತಿರುಪತಿ ಪಟ್ಟಣದಲ್ಲಿ ನಡೆದಿದ್ದು, ದೇವಾಲಯವಿರುವ

ಬೆಟ್ಟದ ಮೇಲಿರುವ ತಿರುಮಲದಲ್ಲಿ ಅಲ್ಲ. ವೈಕುಂಠ ಏಕಾದಶಿ ಅಂಗವಾಗಿ ವೈಕುಂಠದ ದ್ವಾರದ ಮೂಲಕ ದರ್ಶನ ಪಡೆಯುವುದನ್ನು ಅತ್ಯಂತ ಶುಭವೆಂದು ಭಕ್ತರು ಪರಿಗಣಿಸುತ್ತಾರೆ. ತಿರುಮಲ ತಿರುಪತಿ ದೇವಸ್ಥಾನ -ಟಿಟಿಡಿ ತಿರುಪತಿ ಪಟ್ಟಣದ ಮೂರು ಸ್ಥಳಗಳಲ್ಲಿ ೧ ಲಕ್ಷ ೨೦ ಸಾವಿರ ಟೋಕನ್‌ಗಳನ್ನು ವಿತರಿಸಲು ೯೪ ಕೌಂಟರ್‌ಗಳನ್ನು ಆಯೋಜಿಸಿದೆ. ರಾಮನಾಯ್ಡು ಶಾಲೆಯ ಬಳಿ ಸ್ಥಾಪಿಸಲಾಗಿರುವ ಟೋಕನ್ ಕೌಂಟರ್‌ನಲ್ಲಿ ಕಾಲ್ತುಳಿತ ಸಂಭವಿಸಿದೆ. ಕಾಲ್ತುಳಿತ ಘಟನೆಯ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು, ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ಗಾಯಾಳುಗಳಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ಕಲ್ಪಿಸುವಂತೆ ಸೂಚನೆ ನೀಡಿದ್ದಾರೆ. ಅವರು ಇಂದು ಮಧ್ಯಾಹ್ನ ತಿರುಪತಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ. ಈ ಮಧ್ಯೆ, ತಿರುಮಲ ತಿರುಪತಿ ದೇವಸ್ಥಾನಗಳ ಕಾರ್ಯನಿರ್ವಾಹಕ ಅಧಿಕಾರಿ ಘಟನೆಯ ಬಗ್ಗೆ ತನಿಖೆಗೆ ಆದೇಶಿಸಿದ್ದಾರೆ. ಮುಂದೆ ಇಂತಹ ಘಟನೆಗಳು ನೆಡೆಯದಂತೆ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಗಾಯಾಳುಗಳಿಗೆ ಮಾಹಿತಿ ನೀಡಲು ಮತ್ತು ಸಹಾಯ ಕಲ್ಪಿಸಲು ನಿಯಂತ್ರಣ ಕೊಠಡಿ ಮತ್ತು ತುರ್ತು ಸಹಾಯವಾಣಿ ಸಂಖ್ಯೆ ೦೮೭೭-೨೨೩೬೦೦೭ ಅನ್ನು ಸ್ಥಾಪಿಸಲಾಗಿದೆ. ಈ ನಡುವೆ ತಿರುಪತಿಯಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಮೃತಪಟ್ಟ ಕುಟುಂಬಗಳಿಗೆ ಸಂತಾಪ ವ್ಯಕ್ತಪಡಿಸಿ, ಗಾಯಗೊಂಡವರು ತ್ವರಿತವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ. ಘಟನೆಯಲ್ಲಿ ತೊಂದರೆಗೊಳಗಾದವರಿಗೆ ರಾಜ್ಯ ಸರ್ಕಾರ ಸಾಧ್ಯವಿರುವ ಎಲ್ಲ ನೆರವು ಕಲ್ಪಿಸಲಿದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ಒಂದು ರಾಷ್ಟ್ರ ಒಂದು ಚುನಾವಣೆಗೆ ಸಂಬಂಧಿಸಿದ ಎರಡು ವಿಧೇಯಕಗಳ ಕುರಿತ ಜಂಟಿ ಸಂಸದೀಯ ಸಮಿತಿ - ಜೆಪಿಸಿಯ ಮೊದಲ ಸಭೆ ನಿನ್ನೆ ನವದೆಹಲಿಯಲ್ಲಿ ನಡೆಯಿತು. ಈ ಮಸೂದೆಗಳನ್ನು ಅಧಿಕೃತವಾಗಿ ಸಂವಿಧಾನ ೧೨೯ನೇ ತಿದ್ದುಪಡಿ ಮಸೂದೆ -೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ ತಿದ್ದುಪಡಿ ಮಸೂದೆ -೨೦೨೪ ಎಂದು ಹೆಸರಿಸಲಾಗಿದೆ. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಜೆಪಿಸಿ ಅಧ್ಯಕ್ಷ ಪಿ.ಪಿ. ಚೌಧರಿ, ಕಾನೂನು ತಜ್ಞರು, ನಾಗರಿಕ ಸಮಾಜದ ಸದಸ್ಯರು, ನ್ಯಾಯಾಂಗ ಮತ್ತು ರಾಜಕೀಯ ಪಕ್ಷಗಳ ಎಲ್ಲ ಪಾಲುದಾರರ ಮಾತನ್ನು ಆಲಿಸಲು ಸಮಿತಿಯು ಪ್ರಯತ್ನಿಸಲಿದೆ. ಎಲ್ಲಾ ಸದಸ್ಯರೊಂದಿಗೆ ಚರ್ಚಿಸಿ, ಎಲ್ಲರಿಂದಲೂ ಸಲಹೆಗಳನ್ನು ಪಡೆದ ನಂತರ ಸಮಿತಿಯು ಮುಂದಿನ ಹೆಜ್ಜೆ ಇಡಲಿದೆ ಎಂದು ಹೇಳಿದರು. ಸಭೆಯಲ್ಲಿ ಕಾನೂನು ಮತ್ತು ನ್ಯಾಯಾಂಗ ಸಚಿವಾಲಯದ ಪ್ರತಿನಿಧಿಗಳು ಪ್ರಸ್ತಾವಿಕ ಕಾನೂನುಗಳ ನಿಬಂಧನೆಗಳ ಕುರಿತು ಸದಸ್ಯರಿಗೆ ವಿವರಿಸಿದರು. ಜೆಪಿಸಿ ಸಮಿತಿಯು ಲೋಕಸಭೆಯಿಂದ ೨೭ ಮತ್ತು ರಾಜ್ಯಸಭೆಯಿಂದ ೧೨ ಸೇರಿದಂತೆ ಒಟ್ಟು ೩೯ ಸದಸ್ಯರನ್ನು ಒಳಗೊಂಡಿದೆ. ಸಂಸತ್ತಿನ ಮುಂದಿನ ಅಧಿವೇಶನದ ಕೊನೆಯ ವಾರದ ಮೊದಲ ದಿನದೊಳಗೆ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲಿದೆ.

<><><><>

ಒಡಿಶಾದ ಭುವನೇಶ್ವರದಲ್ಲಿ ನಿನ್ನೆ ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶ ಆರಂಭಗೊಂಡಿದೆ. ೭೫ ದೇಶಗಳ ಸುಮಾರು ಆರು ಸಾವಿರ ಅನಿವಾಸಿ ಭಾರತೀಯರು, ರಾಜ್ಯದ ಶ್ರೀಮಂತ ಸಂಸ್ಕೃತಿ ಮತ್ತು ಪರಂಪರೆಯ ಅನಾವರಣಕ್ಕೆ ಸಾಕ್ಷಿಯಾಗಿದ್ದರು. ಇದೇ ವೇಳೆ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ಆಯೋಜಿಸಿರುವ ಯುವ ಪ್ರವಾಸಿ ಭಾರತೀಯ ದಿವಸ್ ಸಮಾವೇಶಕ್ಕೆ ಚಾಲನೆ ನೀಡಲಾಗಿದೆ. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಡಾ.ಎಸ್.ಜೈಶಂಕರ್, ಡಾ.ಮನ್ಸೂಖ್ ಮಾಂಡವೀಯ, ಪವಿತ್ರಾ ಮಾರ್ಗರಿಟಾ, ರಕ್ಷಾ ನಿಖಿಲ್ ಕಾಡ್ಸೆ ಮತ್ತು ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಭಾಗವಹಿಸಿದ್ದರು. ಇಂದು ಪ್ರಧಾನಿ ನರೇಂದ್ರ ಮೋದಿ ಅವರು, ಕಾರ್ಯಕ್ರಮಕ್ಕೆ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ. ದೇಶದ ಅಭಿವೃದ್ಧಿ ಮತ್ತು ಜಾಗತಿಕ ಮನ್ನಣೆಗೆ ಅನಿವಾಸಿ ಭಾರತೀಯ ಸಮುದಾಯ ನೀಡುತ್ತಿರುವ ಕೊಡುಗೆಗಳನ್ನು ಗುರುತಿಸಲಾಗುತ್ತಿದೆ. 'ವಿಕಸಿತ ಭಾರತಕ್ಕಾಗಿ ಅನಿವಾಸಿ ಭಾರತೀಯರ ಕೊಡುಗೆ' ಎಂಬುದು ಈ ಬಾರಿಯ ಸಮಾವೇಶದ ಘೋಷವಾಕ್ಯವಾಗಿದೆ.

<><><><>

ಕೌಲಾಲಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಶಟ್ಲರ್‌ಗಳಾದ ಹೆಚ್.ಎಸ್. ಪ್ರಣಾಯ್ ಹಾಗೂ ಮಾಳವಿಕಾ ಬಾನ್ಸೋಡ್ ಸಿಂಗಲ್ಸ್ ಪಂದ್ಯಗಳಲ್ಲಿ ಜಯ ಸಾಧಿಸಿ ಪ್ರಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಮೊದಲ ಸುತ್ತಿನ ಪಂದ್ಯದಲ್ಲಿ ಅವರು ಕೆನಡಾದ ಬ್ರಿಯಾನ್ ಯಾಂಗ್ ಅವರನ್ನು ೨೧-೧೨, ೧೭-೨೧ ಮತ್ತು ೨೧-೧೫ ಸೆಟ್‌ಗಳಿಂದ ಪರಾಭವಗೊಳಿಸಿದರು. ಇಂದು ನಡೆಯಲಿರುವ ಪ್ರಿ-ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಎಚ್.ಎಸ್.ಪ್ರಣಯ್, ಚೀನಾದ ಶೀ ಫೆಂಗ್ ಲೀ ಅವರನ್ನು ಎದುರಿಸಲಿದ್ದಾರೆ. ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಮಾಳವಿಕಾ ಬಾನ್ಸೋಡ್, ಎರಡನೇ ಸುತ್ತು ಪ್ರವೇಶಿಸಿದ್ದಾರೆ. ಅವರು ಮಲೇಷ್ಯಾದ ಜಿನ್ ವೀ ಗೋ ಅವರನ್ನು ೨೧-೧೫, ೨೧-೧೬ ನೇರ ಸೆಟ್‌ಗಳಿಂದ ಸೋಲಿಸಿದರು. ಮತ್ತೊಂದೆಡೆ, ಮಿಶ್ರ ಡಬಲ್ಸ್ ವಿಭಾಗದಲ್ಲಿ ಭಾರತದ ಧ್ರುವ್ ಕಪಿಲಾ ಮತ್ತು ತನಿಶಾ ಕ್ಯಾಸ್ಟ್ರೋ ಜೋಡಿ, ಪ್ರಿ-ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ್ದಾರೆ. ಭಾರತದ ಜೋಡಿ, ದಕ್ಷಿಣ ಕೊರಿಯಾದ ಸಂಗ್ ಹ್ಯುನ್ ಕೋ ಮತ್ತು ಹೈ ವಾನ್ ಇಯೋಮ್ ಅವರನ್ನು ಮೊದಲ ಸುತ್ತಿನಲ್ಲಿ ೨೧-೧೩, ೨೧-೧೪ ಸೆಟ್‌ಗಳಿಂದ ಸೋಲಿಸಿದ್ದು, ಇಂದು ನಡೆಯಲಿರುವ ೧೬ ರ ಸುತ್ತಿನ ಪಂದ್ಯದಲ್ಲಿ ಚೀನಾದ ಚಿ ಜಾಂಗ್ ಮತ್ತು ಕ್ಸಿಂಗ್ ಚೆಂಗ್ ಜೋಡಿಯನ್ನು ಎದುರಿಸಲಿದೆ. ಮತ್ತೊಂದು ಭಾರತೀಯ ಜೋಡಿ, ಆದ್ಯಾ ವರಿಯತ್ ಮತ್ತು ಸತೀಶ್ ಕರುಣಾಕರನ್ ಕೂಡ ಮಿಶ್ರ ಡಬಲ್ಸ್ ಪ್ರಿ-ಕ್ವಾರ್ಟರ್ ಫೈನಲ್‌ಗೆ ಮುನ್ನಡೆದಿದ್ದಾರೆ. ೩೨ ರ ಸುತ್ತಿನ ಪಂದ್ಯದಲ್ಲಿ ಅವರು ತಮ್ಮ ದೇಶದವರೇ ಆದ ಅಮೃತ ಪ್ರಮುತೇಶ್ ಮತ್ತು ಆಶಿತ್ ಸೂರ್ಯ ಅವರನ್ನು ೨೧-೧೩, ೨೧-೧೫ ಸೆಟ್‌ಗಳಿಂದ ಸೋಲಿಸಿದರು.

<><><><>